# ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 03 ಬಿಇಎಂ 2020 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 14.07.2021.

## ಸುತ್ತೋಲೆ

ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020 (ಭಾಗ), ದಿನಾಂಕ: 30.03.2021ರಲ್ಲಿ 2021-22ನೇ ಸಾಲಿನಲ್ಲಿ ಆರ್ಥಿಕ ಇಲಾಖೆಯ ಸಹಮತಿ ಪಡೆದೇ ನೇಮಕಾತಿ ಆದೇಶ ನೀಡಲು ಆಡಳಿತ ಇಲಾಖೆಗಳಿಗೆ ತಿಳಿಸಲಾಗಿತ್ತು.

ಸದರಿ ಸುತ್ತೋಲೆಯು ಅನುಕಂಪ ಆಧಾರದ ನೇಮಕಾತಿಗಳಿಗೂ ಅನ್ವಯವಾಗುತ್ತದೆಯೇ ಎಂಬ ಬಗ್ಗೆ ಹಾಗೂ ಸದರಿ ಸುತ್ತೋಲೆಯಿಂದ ವಿನಾಯಿತಿಯನ್ನು ಕೋರಿ ಆರ್ಥಿಕ ಇಲಾಖೆಯಲ್ಲಿ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿವೆ.

ಈ ಹಿನ್ನೆಲೆಯಲ್ಲಿ, 2021-22ನೇ ಸಾಲಿನಲ್ಲಿ ಅನುಕಂಪ ಆಧಾರದ ನೇಮಕಾತಿಗಳಿಗೆ ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020 (ಭಾಗ), ದಿನಾಂಕ: 30.03.2021 ಅನ್ವಯವಾಗುವುದಿಲ್ಲವೆಂದು ಸ್ಪಷ್ಟಪಡಿಸಿದೆ.

Ekroop Caur 14/7

(ಡಾ. ಏಕ್‌ರೂಪ್ ಕೌರ್)
ಸರ್ಕಾರದ ಕಾರ್ಯದರ್ಶಿ(ಆ&ಸಂ)
ಆರ್ಥಿಕ ಇಲಾಖೆ

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ಎಲ್ಲಾ ನಿಗಮ/ಮಂಡಳಿಗಳ ಮುಖ್ಯಸ್ಥರು.
6. ಆರ್ಥಿಕ ಇಲಾಖೆಯ ವಿಶೇಷ/ಅಪರ/ಉಪ/ಅಧೀನ ಕಾರ್ಯದರ್ಶಿಗಳು/ವಿಶೇಷಾಧಿಕಾರಿಗಳು/ಶಾಖಾಧಿಕಾರಿಗಳು
7. ಹೆಚ್ಚುವರಿ ಪ್ರತಿಗಳು.